# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:111 RNI NO.KAR KAN/2003/10452:No./PMG/KA/NK/BM/743/24-26 ರವಿವಾರ ದಿನಾಂಕ: 24-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2

### ಲೋಕಸಭಾ ಚುನಾವಣೆ:ನೋಡಲ್ ಅಧಿಕಾರಿಗಳ ಸಭೆ

## ಚೆಕ್ ಪೋಸ್ಟ್ ಗಳಲ್ಲಿ ತೀವ್ರ ನಿಗಾ ವಹಿಸಲು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಸೂಚನೆ



ಬೆಳಗಾವಿ, ಮಾ.23: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಕ್ರಮ ಮದ್ಯ, ಹಣ ಮತ್ತಿತರ ವಸ್ತುಗಳ ಸಾಗಾಣಿಕೆ ತಡೆಗಟ್ಟುವ ನಿಟ್ಟಿನಲ್ಲಿ ಸ್ಥಾಪಿಸಲಾಗಿರುವ ಚೆಕ್ ಪೋಸ್ಟ್ ಗಳಲ್ಲಿ ತೀವ್ರ ನಿಗಾವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶನಿವಾರ (ಮಾ.23) ನಡೆದ ಸಹಾಯಕ ಚುನಾವಣಾಧಿಕಾರಿಗಳು ಮತ್ತು ನೋಡಲ್ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ 65 ಚೆಕ್ ಪೋಸ್ಟ್ ಗಳಲ್ಲಿ ನಿಯೋಜಿಸಲಾಗಿರುವ ತಂಡಗಳು ಸಕ್ರಿಯವಾಗಿ ಕೆಲಸ ಮಾಡಬೇಕು.

ಚುನಾವಣೆಯನ್ನು ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ ನಡೆಸಲು ಅನುಕೂಲವಾಗುವಂತೆ ಪ್ರತಿಯೊಂದು ತಂಡ ಮತ್ತು ನೋಡಲ್ ಅಧಿಕಾರಿಗಳು ತಮ್ಮ ಹೊಣೆಗಾರಿಕೆಗಳನ್ನು ಅರಿತುಕೊಂಡು ಕೆಲಸ ಮಾಡಬೇಕು.

ಜಿಲ್ಲೆಯ ಎಲ್ಲ ಎಫ್.ಎಸ್.ಟಿ. ತಂಡಗಳು ಚುರುಕಿನಿಂದ ಕೆಲಸ ಮಾಡಬೇಕು. ಪ್ರತಿ ತಂಡಕ್ಕೆ ನೀಡಲಾಗಿರುವ ವಾಹನಗಳಿಗೆ ಜಿಪಿಎಸ್ ಅಳವಡಿಸಿರುವುದರಿಂದ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳು ನಿರಂತರವಾಗಿ ತಂಡಗಳ ಮೇಲೆ ನಿಗಾ ವಹಿಸಬೇಕು ಎಂದು ನಿತೇಶ ಪಾಟೀಲ ಸೂಚನೆ ನೀಡಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ರಾಹುಲ್ ಶಿಂಧೆ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಸಹಾಯಕ ಚುನಾವಣಾಧಿಕಾರಿಗಳಾದ ಶಕೀಲ್ ಅಹ್ಮದ್, ಸತೀಶ್ ಕುಮಾರ್, ನೋಡಲ್ ಅಧಿಕಾರಿಗಳಾದ ನಜ್ಮಾ ಪೀರಜಾದೆ, ವಿಜಯಕುಮಾರ್, ಶಿವನಗೌಡ ಪಾಟೀಲ, ಶ್ರೀಶೈಲ್ ಕಂಕಣವಾಡಿ, ನಾಗರಾಜ್, ಶ್ರೀನಿವಾಸ್, ಗುರುನಾಥ ಕಡಬೂರ, ಶಿರೀಷ್ ಕಡಗದಕ್ಕೆ, ಮಹೇಶ್ ತುಬಾಕಿ ಮತ್ತಿತರರು ಉಪಸ್ಥಿತರಿದ್ದರು.

## ಕೆಪಿಸಿಸಿ: ನಾಲ್ವರು ಕಾರ್ಯಾಧ್ಯಕ್ಷರ ಬದಲಾವಣೆ,ಐವರ ನೇಮಕ

ಬೆಂಗಳೂರು:ಲೋಕಸಭೆ ಚುನಾವಣೆಯಲ್ಲಿ ಪಕ್ಷ ಸಂಘಟನೆಗೆ ಚುರುಕು ನೀಡಲು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ(ಕೆಪಿಸಿಸಿ)ಗೆ ಮೇಜರ್ ಸರ್ಜರಿ ಮಾಡಲಾಗಿದ್ದು, ನಾಲ್ವರು ಕಾರ್ಯಾಧ್ಯಕ್ಷರನ್ನು ಬದಲಾವಣೆ ಮಾಡಿ, ಹೊಸದಾಗಿ ಐವರು ಕಾರ್ಯಾಧ್ಯಕ್ಷರನ್ನು ನೇಮಕ ಮಾಡಲಾಗಿದೆ. ಸದ್ಯದ ಇರೋ ನಾಲ್ವರು ಕಾರ್ಯಾಧ್ಯಕ್ಷರನ್ನು ಬದಲಾವಣೆ ಮಾಡಲಾಗಿದೆ. ನೂತನ ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಧಾರವಾಡ ಶಾಸಕ ವಿನಯ್ ಕುಲಕರ್ಣಿ, ತನ್ವೀರ್ ಸೇಠ್, ಜಿ.ಸಿ.ಚಂದ್ರಶೇಖರ್, ಮಂಜುನಾಥ್ ಭಂಡಾರಿ ಹಾಗೂ ವಸಂತ್ ಕುಮಾರ್ ಅವರನ್ನು ನೇಮಕ ಮಾಡಿ ಎಐಸಿಸಿ ಶನಿವಾರ ಆದೇಶ ಹೊರಡಿಸಿದೆ.

ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಮಾಜಿ ಸಚಿವ ವಿನಯ್ ಕುಮಾರ್ ಸೊರಕೆ ಅವರನ್ನು ಹಾಗೂ ಸಹ ಅಧ್ಯಕ್ಷರಾಗಿ ಎಲ್ ಹನುಮಂತಯ್ಯ ಅವರನ್ನು ನೇಮಕ ಮಾಡಲಾಗಿದೆ.ಕೆಪಿಸಿಸಿ ಪ್ರಚಾರ ಸಮಿತಿ ಉಪಾಧ್ಯಕ್ಷರಾಗಿ ರಿಜ್ವಾನ್ ಅರ್ಷದ್ ಅವರನ್ನು ನೇಮಕ ಮಾಡಲಾಗಿದೆ.

## ಲೋಕಸಭಾ ಚುನಾವಣೆ: ದೂರು ನಿರ್ವಹಣೆ, ಎಂಸಿಸಿ, ಸಿವಿಜಿಲ್ ಕೇಂದ್ರಗಳ ಸ್ಥಾಪನೆ


ಬೆಳಗಾವಿ, ಮಾ.23: ಭಾರತ ಚುನಾವಣಾ ಆಯೋಗದಿಂದ ಸಾರ್ವತ್ರಿಕ ಲೋಕಸಭಾ ಚುನಾವಣೆಯ ದಿನಾಂಕ ನಿಗದಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯಂನ್ವಯ ಚುನಾವಣೆಯ ಮಾದರಿ ನೀತಿ ಸಂಹಿತೆಯು ಮಾರ್ಚ್ 16, 2024 ರಿಂದ ರಾಜ್ಯಾದ್ಯಂತ ಜಾರಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ದೂರು ನಿರ್ವಹಣಾ ಕೇಂದ್ರ, ಮಾದರಿ ನೀತಿ ಸಂಹಿತೆ ನಿಯಂತ್ರಣ ಕೊಠಡಿ ಹಾಗೂ C-Vigil ಕೊಠಡಿಯನ್ನು ಸ್ಥಾಪಿಸಲಾಗಿತ್ತು. ಪ್ರಸ್ತುತ ಸದರಿ ನಿಯಂತ್ರಣ ಕೊಠಡಿಗಳನ್ನು ಬೆಳಗಾವಿ ವಿಶ್ವೇಶ್ವರಯ್ಯಾ ನಗರದ ಸ್ಮಾರ್ಟಸಿಟಿ ಕಮಾಂಡ್ ???ಂಡ್ ಕಂಟ್ರೋಲ್ ಸೆಂಟರ್ ಸಭಾಂಗಣಕ್ಕೆ ಸ್ಥಳಾಂತರಿಸಲಾಗಿದೆ. ದೂರು ನಿರ್ವಹಣಾ ಕೇಂದ್ರ ದೂರವಾಣಿ ಸಂಖ್ಯೆ 0831-2007015, ಮಾದರಿ ನೀತಿ ಸಂಹಿತೆ ಕೊಠಡಿ ಸಂಖ್ಯೆ 0831-2007018, ಸಿವಿಜಿಲ್(ಅ-ಗಿುರುಟ) ದೂರವಾಣಿ ಸಂಖ್ಯೆ 0831-2007017 ಗೆ ಸಾರ್ವಜನಿಕರು ಕರೆ ಮಾಡಬಹುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಸಭಾ ಚುನಾವಣೆ:ದೇವಸ್ಥಾನ, ಮಂದಿರ/ಮಸೀದಿ ಪ್ರಾರ್ಥನಾ ಸ್ಥಳಗಳಲ್ಲಿ ಚುನಾವಣಾ ಪ್ರಚಾರ ಕಾರ್ಯ ನಿರ್ಬಂಧ

ಬೆಳಗಾವಿ, ಮಾ.23: ಭಾರತ ಚುನಾವಣಾ ಆಯೋಗದಿಂದ ಸಾರ್ವತ್ರಿಕ ಲೋಕಸಭಾ ಚುನಾವಣೆಯ ದಿನಾಂಕ ನಿಗದಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯಂನ್ವಯ ಚುನಾವಣೆಯ ಮಾದರಿ ನೀತಿ ಸಂಹಿತೆಯು ಮಾರ್ಚ್ 16, 2024 ರಿಂದ ರಾಜ್ಯಾದ್ಯಂತ ಜಾರಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಯಾವುದೇ ರಾಜಕೀಯ ಪಕ್ಷಗಳು ಹಾಗೂ ದೇವಸ್ಥಾನ, ಮಂದಿರ/ ಚರ್ಚ/ ಮಸೀದಿ ಹಾಗೂ ಪ್ರಾರ್ಥನಾ ಸ್ಥಳಗಳಿಗೆ ಸಂಬಂಧಿಸಿದ ಆಡಳಿತ ಮಂಡಳಿಗಳು ಅಥವಾ ಮುಖ್ಯಸ್ಥರುಗಳು ದೇವಸ್ಥಾನಗಳಲ್ಲಿ/



ಮಂದಿರಗಳಲ್ಲಿ/ ಚರ್ಚಗಳಲ್ಲಿ/ ಮಸೀದಿಗಳಲ್ಲಿ ಹಾಗೂ ಪ್ರಾರ್ಥನಾ ಸ್ಥಳಗಳಲ್ಲಿ ಚುನಾವಣೆಯ ಕುರಿತು ಯಾವುದೇ ರೀತಿಯ ಪ್ರಚಾರ ಕಾರ್ಯಗಳನ್ನು ಕೈಗೊಳ್ಳತಕ್ಕದ್ದಲ್ಲ.

ಒಂದು ವೇಳೆ ಇದಕ್ಕೆ ತಪ್ಪಿದಲ್ಲಿ ಸಂಬಂಧಿಸಿದವರ ವಿರುದ್ಧ ಕಾನೂನು ಪ್ರಕಾರ ನಿಯಮಾನುಸಾರ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬೆಳಗಾವಿ: ಜವಾಹರಲಾಲ್ ನೆಹರೂ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಮತದಾನ ಜಾಗೃತಿಯನ್ನು ಮೂಡಿಸಲಾಯಿತು. ಮುಂಬರುವ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾನ ಜಾಗೃತೆ ಅಭಿಯಾನವನ್ನು ಜವಾಹರಲಾಲ ನೆಹರೂ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಮತದಾನ ಜಾಗೃತೆ ಅಭಿಯಾನವನ್ನು ಪಿ.ಎನ.ಲೋಕೇಶ, ಆಯುಕ್ತರು ಮಹಾನಗರ ಪಾಲಿಕೆ ಬೆಳಗಾವಿ ಹಾಗೂ ಗುರುನಾಥ ದಡ್ಡೆ, ಉಪ ಆಯುಕ್ತರು (ಕಂದಾಯ) ಇವರು ಜರುಗಿಸಿದರು.

## ಹಲಗಾ ಮಚ್ಚೆ ಬೈಪಾಸ್ ವಿರೋಧಿಸಿ ರೈತರಿಂದ ಪ್ರತಿಭಟನೆ




ಬೆಳಗಾವಿ: ಚೆನ್ನಮ್ಮ ವೃತ್ತದಲ್ಲಿ ಬ್ಯಾನರ್ ಹಿಡಿದುಕೊಂಡು, ಉರುಳಾಡಿ ವಿನೂತನವಾಗಿ ಪ್ರತಿಭಟಿಸಿದ ರೈತರು ರಸ್ತೆ ಕಾಮಗಾರಿಯನ್ನು ವಿರೋಧಿಸಿ ಆಕ್ರೋಶ ವ್ಯಕ್ತಪಡಿಸಿದರು. ನಗರದ ಸುತ್ತಮುತ್ತಲಿನ ಇರುವ ಎಲ್ಲ ಫಲವತ್ತಾದ ಭೂಮಿಯಾಗಿದ್ದು, ಬೆಳ ಬೆಳೆಯುತ್ತಾರೆ. 2000 ಇಸವಿಯಲ್ಲಿ ಆಗಿನ ರಾಜ್ಯದ ಮುಖ್ಯಮಂತ್ರಿಗಳಾದ ಎಸ್ ಎಂ ಕೃಷ್ಣ ಅವರು ನಗರ ಅಭಿವೃದ್ಧಿಯವರ ಮುಖಾಂತರ ಸರ್ವೆ ಮಾಡಿಸಿದರು. ಸರ್ವೆ ವರದಿಯ ಪ್ರಕಾರ ಈ ಭೂಮಿಯ ಆಳ 50 ರಿಂದ 60 ಪುಟ ಎರಿ ಮಣ್ಣು ಹೊಂದಿದ್ದು ಇರುತ್ತದೆ. ರಾಷ್ಟ್ರೀಯ ಹೆದ್ದಾರಿ ಮಾಡುವುದು ಇಲ್ಲಿ ಸೂಕ್ತ ಅಲ್ಲ ಎಂದುತಿಳಿಸಿರುತ್ತಾರೆ ಎಂದು ಸಂಘ ಮನವಿ ಮಾಡಿಕೊಂಡಿತು.

ಕಳೆದ 2019ರಲ್ಲಿ ಇರುವ ಬಿಜೆಪಿ ಸರ್ಕಾರ ವರ್ಕ್ ಆರ್ಡರ್ ಇಲ್ಲದೆ.ಮತ್ತು ಜಮೀನ್ ಇರುವ ರೈತರಿಗೆ ತಿಳಿಸದ ಹಾಗೂ ನ್ಯಾಯಾಲಯದ ಆದೇಶ ಗಾಳಿಗೆ ತೂರಿ ರಾಷ್ಟ್ರೀಯ ಹೆದ್ದಾರಿ ನಗಮ ಅಧಿಕಾರಿಗಳು ಹಾಗೂ ಜಿಲ್ಲಾಡಳಿತದವರು ಹಲಗಾ ಮಧ್ಯೆ ಬಾಯಿಪಾಸ್ ಮತ್ತು ರಿಂಗ್ ರೋಡ್ ಮಾಡುವ ಉದ್ದೇಶದಿಂದ ಪೊಲೀಸರ ಮುಖಾಂತರ ಜಮೀನು ಕಳೆದುಕೊಳ್ಳುವಂತಹ ರೈತರಿಗೆ ನಾನಾ ತರಹದಿಂದ ತೊಂದರೆ ಉಂಟು ಮಾಡಿರುತ್ತಾರೆ. ಈಗಿನ ನೂತನ ಸರ್ಕಾರ ನಗರದಲ್ಲಿ ಪ್ಲೇವರ್ ಯೋಜನೆ ಶೀಘ್ರದಲ್ಲಿ ಮಾಡುವ ಕಾರ್ಯ ತೆಗೆದುಕೊಂಡು ನಗರದ ಸುತ್ತುಮುತ್ತಲಿನ ಭೂಮಿಯನ್ನು ಉಳಿಸಿ ಎಂದು ಸಂಘ ಅಧಿಕಾರಿಗಳಲ್ಲಿ ಮನವಿ ಈ ಸಂದರ್ಭದಲ್ಲಿ ಮಾಡಿಕೊಂಡರು.

## ಹಿಮಾಚಲದ ಮಾಜಿ ಶಾಸಕರು ಬಿಜೆಪಿ ಸೇರ್ಪಡೆ

ನವದೆಹಲಿ,ಮಾ.23- ಹಿಮಾಚಲ ಪ್ರದೇಶ ವಿಧಾನ ಸಭೆಯ ಹಲವಾರು ಮಾಜಿ ಶಾಸಕರು ಬಿಜೆಪಿಗೆ ಸೇರ್ಪಡೆ ಗೊಳ್ಳುವ ನರೀಕ್ಷೆಯಿದೆ ಮತ್ತು ಮುಂಬರುವ ಉಪ ಚುನಾವಣೆಯಲ್ಲಿ ಅದರ ಟಿಕೆಟ್ನಲ್ಲಿ ಸ್ಪರ್ಧಿಸುವ ನರೀಕ್ಷೆಯಿದೆ ಎಂದು ಮೂಲಗಳು ತಿಳಿಸಿವೆ. ಸದನದಲ್ಲಿ ಹಾಜರಿರಲು ಮತ್ತು ಹಿಮಾಚಲ ಪ್ರದೇಶ ಸರ್ಕಾರದ ಪರವಾಗಿ ಮತ ಚಲಾಯಿಸಲು ಪಕ್ಷದ ವಿಪ್ ಅನ್ನು ಉಲ್ಲಂಘಿಸಿದ್ದಕ್ಕಾಗಿ ಆರು ಬಂಡಾಯ ಕಾಂಗ್ರೆಸ್ ಶಾಸಕರಾದ ಸು?ಧಿರ್ ಶರ್ಮಾ, ರವಿ ಠಾಕೂರ್, ರಾಜಿಂದರ್ ರಾಣಾ, ಇಂದರ್ ದತ್ ಲಖನ್ಪಾಲ, ಚೆತನ್ಯ ಶರ್ಮಾ ಮತ್ತು ದೇವಿಂದರ್ ಕುಮಾರ್ ಭುಟ್ಟೊ ಅವರನ್ನು ಫೆಬ್ರವರಿ 29 ರಂದು ಅನರ್ಹಗೊಳಿಸಲಾಗಿತ್ತು. ಇದೀಗ ಚುನಾವಣಾ ಆಯೋಗ ಅವರ ಕ್ಷೇತ್ರಗಳಿಗೆ ಉಪಚುನಾವಣೆ ಘೋಷಿಸಿದೆ.

ಮೂವರು ಸ್ವತಂತ್ರ ಶಾಸಕರಾದ ಆಶಿಶ್ ಶರ್ಮಾ, ಹೋಶಿಯಾರ್ ಸಿಂಗ್ ಮತ್ತು ಕೆಎಲ್ ಠಾಕೂರ್ ತಮ್ಮ ಸ್ಥಾನಗಳಿಗೆ ರಾಜೀನಾಮೆ ಸಲ್ಲಿಸಿದ್ದಾರೆ. ಅವರ ಸ್ಥಾನಗಳಿಗೂ ಉಪಚುನಾವಣೆ ನಡೆಯುವ ನರೀಕ್ಷೆ ಇದೆ.ನಾವು ನಮ್ಮ ರಾಜೀನಾಮೆ ಯನ್ನು ಸಲ್ಲಿಸಿದ್ದೇವೆ. ನಾವು ಬಿಜೆಪಿಗೆ ಸೇರುತ್ತೇವೆ ಮತ್ತು ಅದರ ಟಿಕೆಟ್ನಲ್ಲಿ ಚುನಾವಣೆಗೆ ಸ್ಪ್ರರ್ಧಿಸುತ್ತೇವೆ ಎಂದು ಸಿಂಗ್ ನಂತರ ಸುದ್ದಿಗಾರರಿಗೆ ತಿಳಿಸಿದರು.

ಮುಖ್ಯಮಂತ್ರಿ ಸುಖವಿಂದರ್ ಸಿಂಗ್ ಸುಖು ನೇತೃತ್ವದ ಕಾಂಗ್ರೆಸ್ ಸರ್ಕಾರವು ಕಳೆದ ತಿಂಗಳು ರಾಜ್ಯಸಭಾ ಚುನಾವಣೆಯಲ್ಲಿ ಈ ಒಂಬತ್ತು ಶಾಸಕರ ಬೆಂಬಲದಿಂದ ರಾಜ್ಯದ ಏಕೈಕ ಸ್ಥಾನಕ್ಕೆ ಬಿಜೆಪಿ ಗೆದ್ದ ನಂತರ ಬಿಕ್ಕಟ್ಟು ಸೃಷ್ಟಿಯಾಗಿತ್ತು.

## ಮಂಗಲಾ ಅಂಗಡಿಗೆ ಹಾಗೂ ಅನಂತ್ ಕುಮಾರ್ ಹೆಗಡೆ ಕೈ ತಪ್ಪಿದ ಟಿಕೆಟ್

ಬೆಳಗಾವಿ: 2024ರ ಲೋಕಸಭಾ ಚುನಾವಣೆಗೆ ಬಿಜೆಪಿ ಬಹುತೇಕ ಕ್ಷೇತ್ರಗಳ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿತ್ತು. ಇದೀಗ ಕರ್ನಾಟಕದ ಅಭ್ಯರ್ಥಿಗಳ ಬಿಜೆಪಿ ಎರಡನೇ ಪಟ್ಟಿಯನ್ನು ಇಂದು ಶನವಾರ ಬಿಡುಗಡೆ ಮಾಡುವ ಸಾಧ್ಯತೆ ಇದ್ದು, ಉಳಿದ ಕ್ಷೇತ್ರದ ಆಕಾಂಕ್ಷಿಗಳು ಕಾತುರದಿಂದ ಕಾಯುತ್ತಿದ್ದಾರೆ.ಬಿಜೆಪಿ ಎರಡನೇ ಪಟ್ಟಿಯುಲ್ಲಿ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಿಂದ ಮಾಜಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ಟಿಕೆಟ್ ಸಿಗುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.



ಇದರ ಅರ್ಥ ಹಾಲಿ ಸಂಸದ ಅನಂತ್ ಕುಮಾರ್ ಹೆಗಡೆ ಈ ಬಾರಿ ಟಿಕೆಟ್ ಕೈ ತಪ್ಪಿರುವುದು ಬಹುತೇಕ ಖಚಿವಾಗಿದೆ. ಇನ್ನು ಉಳಿದ ಲೋಕಸಭಾ ಕ್ಷೇತ್ರಗಳ ಪಟ್ಟಿಯನ್ನು ಬಿಜೆಪಿ ಅಂತಿಮಗೊಳಿಸಿದ್ದು, ಬೆಳಗಾವಿಯಿಂದ ಜಗದೀಶ್ ಶೆಟ್ಟರ್, ಚಿಕ್ಕಬಳ್ಳಾಪುರದಿಂದ ಡಾ.ಕೆ.ಸುಧಾಕರ್, ಚಿತ್ರದುರ್ಗದಿಂದ ಮಾಜಿ ಸಚಿವ ಗೋವಿಂದ್ ಕಾರಜೋಳ ಮತ್ತು ರಾಯಚೂರಿನಿಂದ ಬಿ.ವಿ.ನಾಯಕ್ ಅವರನ್ನು ಅಭ್ಯರ್ಥಿಯಾಗಿ ಆಯ್ಕೆ ಮಾಡಲಾಗಿದೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ.ಲೋಕಸಭಾ ಚುನಾವಣೆಗೆ ದಿನಾಂಕ ಸಮೀಪಿಸುತ್ತಿದ್ದಂತೆ ಬಿಜೆಪಿ ಭರ್ಜರಿ ಪ್ರಚಾರ ಆರಂಭಿಸಿದೆ. ಈಗಾಗಲೇ ಘೋಷಣೆಯಾಗಿರುವ ಅಭ್ಯರ್ಥಿಗಳು ತಮ್ಮ ತಮ್ಮ ಕ್ಷೇತ್ರದಲ್ಲಿ ಪ್ರಚಾರ ನಡೆಸುತ್ತಿದ್ದರೆ, ಇತ್ತ ಚುನಾವಣಾ ಉಸ್ತುವಾರಿ ವಹಿಸಿಕೊಂಡಿರುವ ರಾಜ್ಯದ ನಾಯಕರು, ಟಿಕೆಟ್ ಘೋಷಣೆ ಬಳಿಕ ಅಸಮಾಧಾಗೊಂಡಿರುವ ನಾಯಕರ ಜೊತೆ ಸಂಧಾನ ನಡೆಸುತ್ತಿದ್ದಾರೆ. ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಟಿಕೆಟ್ ಸಿಗದಿರುವ ಬಗ್ಗೆ ಹಲವು ಬಿಜೆಪಿ ನಾಯಕರು ನೇರವಾಗಿ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. (2 ನೇ ಪುಟಕ್ಕೆ)

### ಲೋಕಸಭೆ ಚುನಾವಣೆ: ಎ.ಆರ್.ಓ. ಹಾಗೂ ತಹಶೀಲ್ದಾರರೊಂದಿಗೆ ಸಭೆ

## ಸಮಯಕ್ಕೆ ಸರಿಯಾಗಿ ಸಿವಿಜಿಲ್ ದೂರುಗಳ ವಿಲೇ ಮಾಡಿ: ನಲಿನ್ ಅತುಲ್



ಕೊಪ್ಪಳ, ಮಾರ್ಚ್ 23: ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು, ಚುನಾ ವಣೆಗೆ ಸಂಬಂಧಿಸಿದ ಸಿವಿಜಿಲ್ ಗೆ ಬರುವ ದೂರು ಗಳನ್ನು ಸಮಯಕ್ಕೆ ಸರಿಯಾಗಿ ವಿಲೇವಾರಿ ಮಾಡ ಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಎ.ಆರ್.ಓ. ಹಾಗೂ ತಹಶೀಲ್ದಾರರಿಗೆ ಸೂಚನೆ ನೀಡಿದರು.ಲೋಕಸಭೆ ಚುನಾವಣೆ 2024ರ ಹಿನ್ನೆಲೆಯಲ್ಲಿ ಎ.ಆರ್.ಓ.ಗಳು ಮತ್ತು ತಹಶೀಲ್ದಾರರೊಂದಿಗೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಮತದಾನ ಕೇಂದ್ರಗಳಲ್ಲಿ ಖಚಿತವಾದ ಕನಿಷ್ಠ ಸೌಲಭ್ಯಗಳನ್ನು ಒದಗಿಸಬೇಕಾಗಿದ್ದು, ಎಲ್ಲಾ ಮತಗಟ್ಟೆಗಳಿಗೆ ರ್ಯಾಂಪ್, ಶೌಚಾಲಯಗಳು, ಕುಡಿಯುವ ನೀರು, ವಿದ್ಯುತ್ ಮತ್ತು ನೆರಳು ಒದಗಿಸಲಾಗಿದೆಯೇ ಎಂದು ಮರು-ಪರಿಶೀಲಿಸಿ ಈ ಎಲ್ಲಾ ಸೌಲಭ್ಯಗಳ ಕುರಿತು ಖಚಿತಪಡಿಸಿಕೊಳ್ಳಬೇಕು. ಮಾದರಿ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಎಲ್ಲಾ ಅನಧಿಕೃತ ರಾಜಕೀಯ ಜಾಹೀರಾತುಗಳನ್ನು ತೆಗೆದು ಹಾಕಲಾಗಿದೆ ಎಂದು ಖಚಿತಪಡಿಸಿಕೊಳ್ಳಬೇಕು. ಚೆಕ್‌ಪೋಸ್ಟ್‌ಗಳ ಮೂಲಕ ಹಾದುಹೋಗುವ ಎಲ್ಲಾ ವಾಹನಗಳನ್ನು ಸರಿಯಾದ ಕಾರ್ಯವಿಧಾನದೊಂದಿಗೆ ಪರಿಶೀಲಿಸಲಾಗಿದೆ ಎಂದು ಖಚಿತಪಡಿಸಿಕೊಳ್ಳಿ. ಎಲ್ಲಾ ಅನುಮತಿಗಳನ್ನು ಏಕ ಗವಾಕ್ಷಿ ಸಮಿತಿಯ ಮೂಲಕ ನೀಡಲಾಗುವುದು. ಅಂತಹ ಎಲ್ಲಾ ಅನುಮತಿಗಳ ಬಗ್ಗೆ ವೀಡಿಯೊ ಕಣ್ಗಾವಲು ತಂಡಗಳಿಗೆ ತಿಳಿಸಬೇಕು ಎಂದು ಹೇಳಿದರು. ಅಂಚೆ ಮತಪತ್ರಗಳಿಗೆ ಸಂಬಂಧಿಸಿದಂತೆ ಫಾರ್ಮ್ 12ಡಿ ವಿತರಣೆಯ ಪ್ರಾರಂಭ, ಹೋಮ್ ವೋಟಿಂಗ್ ಸೆಕ್ಟರ್ ಮಾರ್ಗ ಯೋಜನೆ, ಮತಗಟ್ಟೆ ಸಿಬ್ಬಂದಿಗಾಗಿ ಮತದಾರರ ಅನುಕೂಲ ಕೇಂದ್ರ, ಪಿವಿಸಿ ಫಾರ್ ಎವಿಇಎಸ್ ಕೆಟಗರಿ ಸೇರಿದಂತೆ ಇತರ ವಿಳಯಗಳ ಬಗ್ಗೆ ತಿಳಿದುಕೊಂಡು ಕ್ರಮ ಕೈಗೊಳ್ಳಬೇಕು. ಉಪ ವಿಭಾಗಾಧಿಕಾರಿಗಳ ಹಂತದಲ್ಲಿ ಸ್ಟ್ರಾಂಗ್ ರೂಂಗಳ ತಯಾರಿ, ಸಿಸಿಟಿವಿ 24*7 ವ್ಯವಸ್ಥೆ ಹಾಗೂ ಒಂದು ವಿಭಾಗದ ಪೊಲೀಸ್ ಭದ್ರತೆಯನ್ನು ನಿಯೋಜಿಸಬೇಕು. ಇವಿಎಂಗಳು ಮತ್ತು ವಿವಿಪ್ಯಾಟ್‌ಗಳ ರ್ಯಾಂಡಂ ಮೈಜೆಳನ್ ಮತ್ತು ವಿತರಣೆಗೂ ಕ್ರಮ ಕೈಗೊಳ್ಳಬೇಕು. (2 ನೇ ಪುಟಕ್ಕೆ)

## ಬಿಜೆಪಿಯನ್ನು ದ್ವೇಷಿಸಬೇಡಿ : ಕಾರ್ಯಕರ್ತರಿಗೆ ಕೇಜ್ರಿವಾಲ್ ಮನವಿ

ನವದೆಹಲಿ,ಮಾ.23- ನನ್ನ ಬಂಧನದ ಉದ್ದೇಶದಿಂದ ನೀವು ಬಿಜೆಪಿ ಸದಸ್ಯ ರನ್ನು ದ್ವೇಷಿಸಬೇಡಿ ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಆಮ್ ಆದ್ಮಿ ಪಕ್ಷದ ಕಾರ್ಯಕರ್ತರಿಗೆ ಮನವಿ ಮಾಡಿಕೊ ಂಡಿದ್ದಾರೆ. ಜೈಲಿನಲ್ಲಿದ್ದುಕೊಂಡೇ ದೆಹಲಿ ಜನರಿಗೆ ಅರವಿಂದ್ ಕೇಜ್ರಿ ವಾಲ್ ಅವರು ಬರೆದಿರುವ ಭಾವನಾತ್ಮಕ ಪತ್ರವನ್ನು ಅವರ ಪತ್ನಿ ಸುನೀತಾ ಕೇಜ್ರಿವಾಲ್ ಬಹಿರಂಗಪಡಿಸಿದ್ದಾರೆ.ಪತ್ರದಲ್ಲಿ ಕೇಜ್ರಿವಾಲ್ ಯಾವುದೇ ಜೈಲು ನನ್ನನ್ನು ಒಳಗೆ ಇಡಲು ಸಾಧ್ಯವಿಲ್ಲ ಮತ್ತು ನಾನು ಹೊರಗೆ ಬಂದು ನನ್ನ ಭರವಸೆಗಳನ್ನು ಈಡೇರಿಸುತ್ತೇನೆ ಎಂದು ಹೇಳಿಕೊ ಂಡಿದ್ದಾರೆ.ಸಮಾಜ ಮತ್ತು ಸಾರ್ವಜನಿಕ ಕಲ್ಯಾಣಕ್ಕಾಗಿ ಕೆಲಸ ಮಾಡುವ ಆಮ್ ಆದ್ಮಿ ಪಕ್ಷದ (ಎಎಪಿ) ಎಲ್ಲಾ ಕಾರ್ಯಕರ್ತರಿಗೆ ನಾನು ಮನವಿ ಮಾಡುತ್ತೇನೆ, ನಾನು ಜೈಲಿಗೆ ಹೋಗುವುದನ್ನು ನಿಲ್ಲಿಸಬಾ ರದು.ಈ ಕಾರಣಕ್ಕಾಗಿ ಬಿಜೆಪಿ ಜನರನ್ನು ದ್ವೇಷಿಸಬೇಡಿ. ಅವರು ನಮ್ಮ ಸಹೋದರ ಸಹೋದರಿಯರು. ನಾನು ಶೀಘ್ರದಲ್ಲೇ ಹಿಂತಿರು ಗುತ್ತೇನೆ ಎಂದು ಅವರು ಮನವಿ ಮಾಡಿಕೊಂಡಿದ್ದಾರೆ. ನನ್ನ ಪ್ರೀತಿಯ ದೇಶವಾ ಸಿಗಳೇ, ನನ್ನನ್ನು ಬಂಧಿಸಲಾಗಿದೆ, ನಾನು ಜೈಲಿನ ಲ್ಲಿದ್ದರೂ ಇಲ್ಲದಿದ್ದರೂ, ನಾನು ದೇಶ ಸೇವೆಯನ್ನು ಮುಂದುವರಿಸುತ್ತೇನೆ, ನನ್ನ ಇಡೀ ಜೀವನ ದೇಶಕ್ಕಾಗಿ ಮುಡಿಪಾಗಿದೆ, ನನ್ನ ಜೀವನದಲ್ಲಿ ನಾನು ಸಾಕಷ್ಟು ಹೋರಾಟ ಮಾಡಿದ್ದೇನೆ ಮತ್ತು ಇದು ನನಗೆ ತಿಳಿದಿದೆ. ಮುಂದುವರಿಯು ತ್ತದೆ. ಆದ್ದ ರಿಂದ, ಈ ಬಂಧನವು ನನಗೆ ಆಶ್ಚರ್ಯ ತಂದಿಲ್ಲ ಎಂದು ಕೇಜ್ರಿವಾಲ್ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.